ಅ) ಬಸವಕಲ್ಯಾಣದ ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳಿಗೆ ಬೀದರ್‌ನಲ್ಲಿನ ಸಣ್ಣ ನೀರಾವರಿ ಉಪ ವಿಭಾಗವನ್ನು ಅವಲಂಬಿಸಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಬಸವಕಲ್ಯಾಣದಲ್ಲಿ ಸಣ್ಣ ನೀರಾವರಿ ಉಪವಿಭಾಗವನ್ನು ಪ್ರಾರಂಭಿಸಲು ಕ್ರಮಸ ಕೈಗೊಳ್ಳಲಾಗುವುದೇ?

ಡಾ॥ ಆರ್.ಬಿ. ಚೌಧರಿ (ಸಣ್ಣ ನೀರಾವರಿ ರಾಜ್ಯ ಸಚಿವರು):

ಅ) ಬಸವಕಲ್ಯಾಣದಲ್ಲಿ ಸಣ್ಣ ನೀರಾವರಿ ಉಪ-ವಿಭಾಗವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಬಂದಿದೆ.

ಇ) ಪರಿಶೀಲಿಸಲಾಗುವುದು.

ಬಸವ ಕಲ್ಯಾಣದ ರಾಜೇಶ್ವರದಲ್ಲಿ 33 ಕೆವಿಎ ಫವರ್ ಸ್ಟೇಷನ್ ಅನ್ನು ಮಂಜೂರು ಮಾಡುವುದು

332 - ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ): ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವ ಕಲ್ಯಾಣದ ರಾಜೇಶ್ವರದಲ್ಲಿ 33 ಕೆವಿ ಪವರ್ ಸ್ಟೇಷನ್ ಅನ್ನು ಪ್ರಾರಂಭಿಸಲು ಜಾಗಕ್ಕಾಗಿ ಸರ್ವೆ ಮಾಡಲಾಗಿದ್ದು ಇದುವರೆಗೂ ಕ್ರಮ ತೆಗೆದುಕೊಳ್ಳದಿರಲು ಕಾರಣವೇನು?

ಆ) ಅಲ್ಲಿ ವಿದ್ಯುತ್ ಸರಬರಾಜು ಸರಿಯಾದ ರೀತಿಯಲ್ಲಿ ಆಗುತ್ತಿಲ್ಲವಾದ್ದರಿಂದ ರೈತರ ಪಂಪ್ಸೆಟ್ಟಗಳು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ ಆ ಪವರ್ ಸ್ಟೇಷನ್ ಅನ್ನು ಪ್ರಾರಂಭಿಸಲು ಯಾವಾಗ ಕ್ರಮ ತೆಗೆದುಕೊಳ್ಳಲಾಗುವುದು.

ಶ್ರೀ ಕೆ.ಎ. ನಿಸಾರ್ ಅಹಮದ್ (ಇಂಧನ ರಾಜ್ಯ ಮಂತ್ರಿಗಳು):

ಅ) ಬಸವಕಲ್ಯಾಣದ ರಾಜೇಶ್ವರದಲ್ಲಿ ಉದ್ದೇಶಿತ 33 ಕೆವಿ ವಿದ್ಯುತ್ ಸಬ್-ಸ್ಟೇಷನ್ನಿ ಮಂಡಳಿಯು ಹುಮ್ನಾಬಾದ್ನಲ್ಲಿ ನಿರ್ಮಾಣ ಮಾಡುತ್ತಿರುವ 220-110 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಮಾಡಬೇಕಾಗಿದೆ. ಆದ್ದರಿಂದ ಮೊದಲು ಹುಮ್ನಾಬಾದ್ನಲ್ಲಿ ನಿರ್ಮಾಣವಾಗುತ್ತಿರುವ 220-110ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರವನ್ನು ಕಾಲನೆಗೊಳಿಸುವುದು ಅತ್ಯವಶ್ಯಕವಾಗಿದೆ, ಸದರೀ ವಿದ್ಯುತ್ ಸ್ವೀಕರಣಾ ಕೇಂದ್ರದ ನಿರ್ಮಾಣ ಕಾರ್ಯವು ಭರದಿಂದ ಸಾಗುತ್ತಿದ್ದು ಫೆಬ್ರವರಿ 1994ರ ಅಂತ್ಯದ ವೇಳೆಗೆ ಮೊದಲು 100 ಎಂವಿಎ ಸಾಮರ್ಥ್ಯದ ಪವರ್ ಟ್ರಾನ್ಸ್ಫಾರ್ಮರ್ ಚಾಲನೆಗೊಳ್ಳುವ ನಿರೀಕ್ಷೆ ಇದೆ.

ಆ) ರಾಜೇಶ್ವರ ಗ್ರಾಮ ಮತ್ತು ಅದರ ಸುತ್ತಮುತ್ತಲಿನ ಕೆಲವು ಪ್ರದೇಶಗಳಲ್ಲಿ ಸಿಡಿಮೆ ವೋಲ್ಟೇಜ್ ಪರಿಸ್ಥಿತಿ ಉಂಟಾಗಿರುವ ವಿಷಯ ಮಂಡಳಿಯ ಗಮನಕ್ಕೆ ಬಂದಿದೆ ಆದರೆ ಇದರಿಂದ ರೈತರ ಪಂಪ್ಸೆಟ್ಟಗಳು ಹಾಳಾಗುತ್ತಿರುವ ನಿರ್ದಿಷ್ಟ ಪ್ರಕರಣಗಳು ಮಂಡಳಿಯ ಗಮನಕ್ಕೆ ಬಂದಿಲ್ಲ.

ಇ) ರಾಜೇಶ್ವರ ಗ್ರಾಮದಲ್ಲಿ ಉದ್ದೇಶಿತ 33-111 ಕೆವಿ ವಿದ್ಯುತ್ ಸಬ್-ಸ್ಟೇಷನ್ನಿನ ನಿರ್ಮಾಣ ಕಾರ್ಯವನ್ನು 1994-95ರ ಸಾಲಿನಲ್ಲಿ ತೆಗೆದುಕೊಳ್ಳಲಾಗುವುದು.

ಬಸವ ಕಲ್ಯಾಣ ತಾಲ್ಲೂಕಿನ ಸಸ್ತಾಪುರ ಗ್ರಾಮದಲ್ಲಿ 110 ಕೆವಿಎ ಪವರ್ ಸ್ಟೇಷನ್‌ಅನ್ನು ಪ್ರಾರಂಭಿಸುವುದು.

334 - ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ): ಮಾನ್ಯ ಇಂಧನ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವ ಕಲ್ಯಾಣದ ಸಸ್ತಾಪುರದಲ್ಲಿ 110 ಕೆವಿ ಪವರ್ ಸ್ಟೇಷನ್ ಆ ಮಾಡಲು ಭೂಮಿಯನ್ನು ವಶಪಡಿಸಿಕೊಂಡಿದ್ದು, ಇದುವರೆಗೂ ಕ್ರ ತೆಗೆದುಕೊಳ್ಳದಿರುವುದು ನಿಜವೆ?

ಆ) ಸಸ್ತಾಪುರ ಗ್ರಾಮದಲ್ಲಿ ವಿದ್ಯುತ್ ಸರಬರಾಜು ಸರಿಯಾದ ರೀತಿಯಲ್ಲಿ ಆಗ ರೈತರ ಪಂಪುಸೆಟ್ಟುಗಳು ಹಾಳಾಗುತ್ತಿರುವುದರಿಂದ ಅಲ್ಲಿ ಪವರ್ ಸ್ಟೇಷ ಅನ್ನು ಪ್ರಾರಂಭಿಸಲು ಸರ್ಕಾರ ಶೀಘ್ರವಾಗಿ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಕೆ.ಎ. ನಿಸಾರ್ ಅಹಮದ್ (ಇಂಧನ ರಾಜ್ಯ ಸಚಿವರು);

ಅ) ಬಸವಕಲ್ಯಾಣದ ಸಸ್ತಾಪುರದಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಿರುವ 1 ಕೆವಿ ಪವರ್ ಸ್ಟೇಷನ್‌ಗೆ ಬೇಕಾಗುವ ಭೂಮಿಯನ್ನು ಇದುವರೆವಿಗೆ ವಶಪಡಿಸಿಕೊಂಡೀ ಆದ್ದರಿಂದ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಿಲ್ಲ.

ಆ) ಭೂಮಿ ಸ್ವಾಧೀನದ ಕಾರ್ಯವು ಪ್ರಗತಿಯಲ್ಲಿದೆ ಭೂಮಿಯನ್ ಸ್ವಾಧೀನಪಡಿಸಿಕೊಂಡ ನಂತರ ನಿರ್ಮಾಣ ಕಾರ್ಯವನ್ನು ಆದಷ್ಟು ಜಾಗ್ರ ಪ್ರಾರಂಭಿಸಲಾಗುವುದು. ಅಲ್ಲದೇ ಸಸ್ತಾಪುರದ ಉದ್ದೇಶಿತ 110 ಕೆವಿ ವಿದ್ಯುತ್ ಉಪಕೇಂದ್ರಕ್ಕೆ ವಿದ್ಯುತ್ ಸರಬರಾಜು ಮಾಡಲು ಹುಮ್ನಾಬಾದ್ನಲ್ಲಿ 220:110 ಕೆ ವಿದ್ಯುತ್ ಸ್ವೀಕರಣಾ ಕೇಂದ್ರವನ್ನು ಚಾಲನೆಗೊಳಿಸುವುದು ಬಹಳ ಅಗತ್ಯವಾಗಿದ ಆದ್ದರಿಂದ ಮಂಡಳಿಯು ಹುಮ್ನಾಬಾದ್ನಲ್ಲಿ 220:110 ಕೆವಿ ವಿದ್ಯುತ್ ಸ್ವೀಕರಣ ಕೇಂದ್ರವನ್ನು ತ್ವರಿತಗತಿಯಲ್ಲಿ ಚಾಲನೆಗೊಳಿಸುವ ಬಗ್ಗೆ ತೀವ್ರ ರೀತಿಯಲ್ಲಿ ಕ್ರಮ ತೆಗೆದುಕೊಳ್ಳುತ್ತಿದೆ.

ಬಸವಕಲ್ಯಾಣದಲ್ಲಿ ಲೋಕೋಪಯೋಗಿ ಇಲಾಖೆಯ ಉಪ ವಿಭಾಗವನ ಪ್ರಾರಂಭಿಸುವ ಬಗ್ಗೆ

333 - ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ): ಮಾನ್ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಮಂಜೂರಾಗಿರುವ ಲೋಕೋಪಯೋಗಿ ಉಪ ವಿಭಾಗವು ಯಾವಾಗ ಪ್ರಾರಂಭವಾಗುವುದು?

ಆ) ಬಸವ ಕಲ್ಯಾಣದಲ್ಲಿ ಉಪ ವಿಭಾಗಾಧಿಕಾರಿಗಳ ಕಛೇರಿ ಭೂ ಸೇನ ಉಪ ವಿಭಾಗ ಸಿವಿಲ್ ಕೋರ್ಟ್ಗಳಿದ್ದು, ಲೋಕೋಪಯೋಗಿ ಇಲಾಖೆಯ ಉಪ ವಿಭಾಗವು ಇಲ್ಲದೆ ಇಲಾಖೆಗೆ ಸಂಬಂಧಪಟ್ಟ ಕೆಲಸ ಕಾರ್ಯಗಳ ಸಾಗಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಉಪ ವಿಭಾಗವನ್ನು ಈ ವರ್ಷದಲ್ಲಿ ಪ್ರಾರಂಭಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು);

ಅ) ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಲೋಕೋಪಯೋಗಿ ಇಲಾಖೆಯ ಯಾವ ಉಪ ವಿಭಾಗವು ಮಂಜೂರಾಗಿರುವುದಿಲ್ಲ. ಕಾರಣ ಸದರಿ ಉಪ ವಿಭಾಗ ಕಛೇರಿಯನ್ನು ಪ್ರಾರಂಭಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) - ಇಲ್ಲ -

ಇ) - ಉದ್ಭವಿಸುವುದಿಲ್ಲ-

ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ವಿಶೇಷ ಅನುದಾನದ ಬಿಡುಗಡೆ

262 - ಶ್ರೀ ಎಂ.ಎಸ್. ಆತ್ಮಾನಂದ (ಮಂಡ್ಯ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?